## ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ: 2020-21 ಸಾಲಿನಲ್ಲಿ ಸುಜಲ-III ಎಕ್ಸಿಟ್ ಸ್ಟ್ರಾಟಜಿ ಯೋಜನೆಯ ಮೊದಲ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:AGRI-AML-91/2020,ದಿನಾಂಕ:02-06-2020 ಮತ್ತು ಸೇರ್ಪಡೆ ಆದೇಶ ದಿನಾಂಕ: 16-06-2020.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ 2020, ದಿನಾಂಕ: 30-05-2020.
3. ಆರ್ಥಿಕ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ : ಆಇ 172 ವೆಚ್ಚ -4/2020, ದಿನಾಂಕ : 30-05-2020
4. ಸರ್ಕಾರದ ಆದೇಶ ಸಂಖ್ಯೆ:AGRI-AML/109/2020(P-1), ದಿನಾಂಕ:03-07-2020.
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಪತ್ರ ಸಂಖ್ಯೆ: :ಜಅಇ /ಲೆ.ವಿ/ಸುಜಲ-3 ಎಸ್ಟ್ರಾ/ಅ.ಬಿ./2020-21, ದಿನಾಂಕ:19-6-2020.

ಪ್ರಸ್ತಾವನೆ:

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಸರ್ಕಾರದ ಆದೇಶಗಳಲ್ಲಿ 2019-20ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2020-21ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಆದೇಶದಲ್ಲಿ ಆರ್ಥಿಕ ಇಲಾಖೆಯು 2020-21 ನೇ ಸಾಲಿನಲ್ಲಿ ಜೂನ್ ರಿಂದ ನವೆಂಬರ್ ವರೆಗೆ 6 ತಿಂಗಳಿಗೆ ಹಣ ಬಿಡುಗಡೆ ಮಾಡಲು ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ ಮಾಡಲಾಗಿದೆ.

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಆರ್ಥಿಕ ಇಲಾಖೆಯು ಅನಧಿಕೃತ ಪರಿಷ್ಕೃತ ಆಯವ್ಯಯ (RE) ದಲ್ಲಿ ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಕಾರ್ಯಕ್ರಮಕ್ಕೆ ನಿಗದಿಯಾಗಿರುವ ರೂ.5000.00 ಲಕ್ಷಗಳ ಅನುದಾನದಲ್ಲಿ ನವೆಂಬರ್-2020 ರವರೆಗೆ ರೂ.2500.00 ಲಕ್ಷಗಳ ಅನುದಾನ ಲಭ್ಯಗೊಳಿಸಲಾಗಿದೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಆದೇಶದಲ್ಲಿ 2020-21ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ಎರಡು ರಾಜ್ಯವಲಯ ಯೋಜನೆಗಳಿಗೆ ಮೊದಲನೇ ತ್ರೈಮಾಸಿಕಕ್ಕೆ ಒಟ್ಟು ರೂ.476.750 ಲಕ್ಷಗಳ ಅನುದಾನವನ್ನು ಕೆಲವು ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ. ಈ ಆದೇಶದಲ್ಲಿ ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ಮೇಲೆ ಓದಲಾದ (5)ರ ಪ್ರಸ್ತಾವನೆಯಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರು 2020-21 ನೇ ಸಾಲಿನ ಆಯವ್ಯಯದಲ್ಲಿ ಸುಜಲ-III ಎಕ್ಸಿಟ್ ಸ್ಟ್ರಾಟಜಿ ಯೋಜನೆ ಲೆಕ್ಕ ಶೀರ್ಷಿಕೆ 2402-00-102-0-31 ಅಡಿ ಕಲ್ಪಿಸಿರುವ ಒಟ್ಟು ಅನುದಾನ ರೂ.1353 ಲಕ್ಷಗಳನ್ನು ಒದಗಿಸಲಾಗಿದ್ದು, ಉಪ ಲೆಕ್ಕ ಶೀರ್ಷಿಕೆ (103) ರಡಿ ರೂ.317.00 ಲಕ್ಷ, (051) ರಡಿ ರೂ.669.00 ಲಕ್ಷಗಳನ್ನು ಒದಗಿಸಲಾಗಿದೆ. ಅದರನ್ವಯ ಈ ಯೋಜನೆಯಡಿ ಮೊದಲ ತ್ರೈಮಾಸಿಕಕ್ಕೆ ಕ್ರಮವಾಗಿ ಉಪ ಲೆಕ್ಕ ಶೀರ್ಷಿಕೆ (103) ರಡಿ ರೂ.79.25 ಲಕ್ಷ, (051) ರಡಿ ರೂ.167.25 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ದಿನಾಂಕ:30-05-2020 ರ ಅಧಿಕಾರ ಪ್ರತ್ಯಾಯೋಜಿಸಿರುವ ಆದೇಶ ಮತ್ತು ಪರಿಷ್ಕೃತ ಆಯವ್ಯಯದ(RE) ಅನಧಿಕೃತ ಟಿಪ್ಪಣಿಗಳನ್ವಯ ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ,ಸುಜಲ-III ಎಕ್ಸಿಟ್ ಸ್ಟ್ರಾಟಜಿ ಯೋಜನೆಯ ಮೊದಲ ತ್ರೈಮಾಸಿಕ ಕಂತಿನ ಅನುದಾನವಾಗಿ ರೂ.246.50 ಲಕ್ಷಗಳನ್ನು (ಉಪ ಲೆಕ್ಕ ಶೀರ್ಷಿಕೆ (103) ರಡಿ ರೂ.79.25 ಲಕ್ಷ, (051) ರಡಿ ರೂ.167.25 ಲಕ್ಷ) ಬಿಡುಗಡೆ ಅನುದಾನ ಬಿಡುಗಡೆ ಮಾಡಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: AGRI-AML-109/2020(P-1) ಬೆಂಗಳೂರು,**
**ದಿನಾಂಕ:14.08.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, 2020-21ನೇ ಸಾಲಿನಲ್ಲಿ ಸುಜಲ-III ಎಕ್ಸಿಟ್ ಸ್ಟ್ರಾಟಜಿ ಯೋಜನೆಯ ಲೆಕ್ಕ ಶೀರ್ಷಿಕೆ 2402-00-102-0-31 ಅಡಿ ಮೊದಲ ತ್ರೈಮಾಸಿಕ ಕಂತಿನ ಅನುದಾನವಾಗಿ ರೂ.246.50 ಲಕ್ಷ (ಎರಡು ಕೋಟಿ ನಲ್ವತ್ತಾರು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಗಳ (ಉಪ ಲೆಕ್ಕ ಶೀರ್ಷಿಕೆ 103-ರಡಿ ರೂ.79.25 ಲಕ್ಷ, 051-ರಡಿ ರೂ.167.25 ಲಕ್ಷ) ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ.

1. ಮೊದಲನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಿದ ಅನುದಾನದಲ್ಲಿ, ವೆಚ್ಚವನ್ನು ಭರಿಸಲು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ 2020, ದಿನಾಂಕ: 30-05-2020 ರನ್ವಯ ಕ್ರಮವಹಿಸತಕ್ಕದ್ದು.
2. 2020-21 ಸಾಲಿನ ಆಯವ್ಯಯದ ಭಾಷಣದ ಕಂಡಿಕೆ:37 ರ ಘೋಷಣೆಯಂತೆ ಸುಜಲ-III ಯೋಜನೆ EXIT STRATEGY ಯೋಜನೆಯನ್ನು ರೂ.986.00 ಲಕ್ಷಗಳ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: AGRI-AML/89/2020, ದಿನಾಂಕ: 14-08-2020ರಲ್ಲಿ ನಮೂದಿಸಿರುವ ಮಾರ್ಗಸೂಚಿಗಳನ್ವಯ ಕ್ರಮವಹಿಸತಕ್ಕದ್ದು.
3. 2020-21ನೇ ಸಾಲಿನ ಎರಡನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆಗೆ ಸರ್ಕಾರದ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ 2020, ದಿನಾಂಕ: 30-05-2020 ರಲ್ಲಿ ನೀಡಿರುವ ಮಾರ್ಗಸೂಚಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 02 ಟಿ.ಎಫ್.ಪಿ 2020, ದಿನಾಂಕ: 30-05-2020 ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 172 ವೆಚ್ಚ-4/2020, ದಿನಾಂಕ: 30-05-2020 ರಲ್ಲಿ ಆರ್ಥಿಕ ಇಲಾಖೆ ನೀಡಿರುವ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

P. Sat 14/8/2020
(ಪಿ.ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

ಪ್ರತಿಯನ್ನು:-

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3. ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.

4. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
7. ಆಂತರಿಕ ಆರ್ಥಿಕ ಸಲಹೆಗಾರರು. ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ. ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
10. ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
11. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು
12. ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು ರವರಿಗೆ (ಆಯುಕ್ತರು ಜಲಾನಯನ ಅಭಿವೃದ್ಧಿ ಇಲಾಖೆ ಇವರ ಮುಖಾಂತರ).
13. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.

ಇವರಿಗೆ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
2. ಸರ್ಕಾರದ ಉಪ ಕಾರ್ಯದರ್ಶಿ 1 & 2, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
3. ತಾಂತ್ರಿಕ ಅಧಿಕಾರಿಗಳು, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.

***********